ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/44/ಸ್ವಾ.ಅ.ಮ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ: 11.08.2022

**ಸುತ್ತೋಲೆ**

ವಿಷಯ: ದೇಶದ 75ನೇ ವರ್ಷದ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಸಂಭ್ರಮವನ್ನು "ಹರ್ ಘರ್ ತಿರಂಗಾ" ಎಂಬ ವಿಶೇಷ ಅಭಿಯಾನದ ಮೂಲಕ ಆಚರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಸಮಸಂಖ್ಯೆ ಪತ್ರದ ದಿನಾಂಕ : 25.07.2022.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಬೆಂಗಳೂರು, ಇವರ ಅ.ಸ.ಪತ್ರ ಸಂಖ್ಯೆ : ಡಿಕೆಸಿ /40025/28/2022 (ಭಾಗ-5) ಬೆಂಗಳೂರು, ದಿನಾಂಕ : 10.08.2022.
3. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರು ದಿನಾಂಕ : 08.08.2022 ರಂದು ಜರುಗಿದ ವೀಡಿಯೋ ಕಾನ್ಫರೆನ್ಸ್‌ನಲ್ಲಿ ನೀಡಿರುವ ನಿರ್ದೇಶನದಂತೆ.
4. ಸರ್ಕಾರದ ಪತ್ರ ಸಂಖ್ಯೆ : ಇಡಿ 70 ವಿವಿಧ 2022, ದಿನಾಂಕ : 10.08.2022.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (1) ಮತ್ತು (2)ರ ಪತ್ರಗಳನ್ವಯ ಈಗಾಗಲೇ ಸರ್ಕಾರದ ನಿರ್ದೇಶನದಂತೆ "ಹರ್ ಘರ್ ತಿರಂಗಾ" ಅಭಿಯಾನವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ರಾಜ್ಯದ ಸರ್ಕಾರಿ / ಅರೆ ಸರ್ಕಾರಿ / ನಿಗಮ ಮಂಡಳಿಗಳು / ಸಾರ್ವಜನಿಕ ಉದ್ಯಮಿಗಳು/ಸ್ವ ಸಹಾಯ ಗುಂಪುಗಳು /ನಾಗರೀಕ ಸಂಸ್ಥೆಗಳು/ಸಾರ್ವಜನಿಕರು / ಕಾಲೇಜು ವಿದ್ಯಾರ್ಥಿಗಳು ಇತರೆ ಎಲ್ಲಾ ಸಿಬ್ಬಂದಿಗಳು ಹಾಗೂ ಅವರ ಕುಟುಂಬ ವರ್ಗದವರೂ ಒಳಗೊಂಡಂತೆ ಸ್ವತ: ತಾವೇ ಕ್ರಿಯಾಶೀಲವಾಗಿ ಭಾಗವಹಿಸುವಂತೆ ಹಾಗೂ ಅವರುಗಳ ಮನೆ /ಕಛೇರಿಗಳ ಮೇಲೆ ಧ್ವಜಾರೋಹಣ ಮಾಡಲು ಪ್ರೇರೇಪಿಸುವಂತೆ ನಿರ್ದೇಶಿಸಲಾಗಿದೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಯ ಎಲ್ಲಾ ಕಛೇರಿಗಳು ಹಾಗು ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಕಾಲೇಜುಗಳ ಕಟ್ಟಡಗಳಲ್ಲಿ ದಿನಾಂಕ : 13.08.2022 ರಿಂದ 15.08.2022 ರವರೆಗೆ ಪ್ರತಿದಿನ ಸೂರ್ಯೋದಯದ ನಂತರ ಬೆಳಗ್ಗೆ 08 ಗಂಟೆಯೊಳಗೆ ಧ್ವಜಾರೋಹಣ ಮಾಡುವುದು, ಸಾಯಂಕಾಲ ಸೂರ್ಯಾಸ್ತದ ವೇಳೆಗೆ ಇಳಿಸಲು ಕ್ರಮವಹಿಸುವುದು. ಮುಂದುವರೆದು ಆಗಸ್ಟ್ 15 ರಂದು ಇಲಾಖಾ ವ್ಯಾಪ್ತಿಯ ಕಾಲೇಜು / ಕಛೇರಿಗಳಲ್ಲಿ ವಿದ್ಯಾರ್ಥಿಗಳು/ ಅಧ್ಯಾಪಕರು/ ಆಡಳಿತ ಸಿಬ್ಬಂಧಿಗಳು ಕಡ್ಡಾಯವಾಗಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸುವಂತೆ ತಿಳಿಸಲಾಗಿದೆ. ಹಾಗೂ ಧ್ವಜಸಂಹಿತೆಯ ಯಾವುದೇ ಉಲ್ಲಂಘನೆಯಾಗದಂತೆ ಕ್ರಮವಹಿಸಲು ಈ ಮೂಲಕ ಸೂಚಿಸಲಾಗಿದೆ.

(ಸಹಿ) 11.8.22

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:
1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು, ಬೋಧಕ / ಬೋಧಕೇತರ ವರ್ಗದ ಸಿಬ್ಬಂದಿಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

..2.,

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಧ್ಯಕ್ಷರು, ಆಜಾದಿ ಕಾ ಅಮೃತ್ ಮಹೋತ್ಸವ್ ಸಮಿತಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
2. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು-01.
3. ಕಛೇರಿ ಪ್ರತಿ.